**Akashvani : Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**25.11.2024** **13.10 hrs**

**<><*<><>*><>**

<u>ಮುಖ್ಯಾಂಶಗಳು</u>

- **ಸಂಸತ್ ಚಳಿಗಾಲದ ಅಧಿವೇಶನ ; ಬುಧವಾರಕ್ಕೆ ಕಲಾಪ ಮುಂದೂಡಿಕೆ**
- **ಸಂವಿಧಾನ ದಿನದ ಪ್ರಯುಕ್ತ ಹಮಾರ ಸಂವಿಧಾನ್ ಹಮಾರ ಸ್ವಾಭಿಮಾನ್ ಪಾದಯಾತ್ರೆ**
- **ಇಟಲಿ, ಭಾರತದ ಪ್ರಮುಖ ಪಾಲುದಾರ ರಾಷ್ಟ್ರ - ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್**
- **ಇಂಡಿಯನ್ ಸೂಪರ್ ಲೀಗ್ ಫುಟ್ಬಾಲ್ ; ಇಂದು ಒಡಿಶಾ-ಹೈದರಾಬಾದ್ ತಂಡಗಳು ಮುಖಾಮುಖಿ**

**<><*<><>*><>**

ಸಂಸತ್‌ನ ಚಳಿಗಾಲದ ಅಧಿವೇಶನ ಇಂದು ಆರಂಭಗೊಳ್ಳುತ್ತಿದ್ದಂತೆ ಉಭಯ ಸದನಗಳಲ್ಲಿ ಪ್ರತಿಪಕ್ಷಗಳ ಗದ್ದಲದ ಕಾರಣ ಕಲಾಪವನ್ನು ಬುಧವಾರಕ್ಕೆ ಮುಂದೂಡಲಾಯಿತು. ಕೈಗಾರಿಕೋದ್ಯಮಿ ಒಬ್ಬರ ವಿರುದ್ಧದ ಲಂಚ ಆರೋಪ, ಮಣಿಪುರ ಹಿಂಸಾಚಾರ, ನಿರುದ್ಯೋಗ ಮತ್ತು ಇತರೆ ವಿಷಯಗಳ ಕುರಿತು ಚರ್ಚೆ ನಡೆಸುವಂತೆ ಪ್ರತಿಪಕ್ಷಗಳು ಪಟ್ಟು ಹಿಡಿದವು. ಈ ವೇಳೆ ಆಡಳಿತ ಮತ್ತು ವಿರೋಧಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಗದ್ದಲು ಉಂಟಾಯಿತು. ಅಂತಿಮವಾಗಿ ಎರಡೂ ಸದನಗಳ ಕಲಾಪವನ್ನು ಬುಧವಾರಕ್ಕೆ ಮುಂದೂಡಲಾಯಿತು. ಇದಕ್ಕೂ ಮುನ್ನ ಇತ್ತೀಚೆಗೆ ನಿಧನರಾದ ಸಂಸದರಾದ ವಸಂತರಾವ್ ಚೌವ್ಹಾಣ್ ಮತ್ತು ಶೇಖ್ ನುರೂಲ್ ಇಸ್ಲಾಂ ಅವರಿಗೆ ಲೋಕಸಭೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ರಾಜ್ಯಸಭೆಯಲ್ಲಿ ಇತ್ತೀಚೆಗೆ ನಿಧನರಾದ ೭ ಮಂದಿ ಮಾಜಿ ರಾಜ್ಯಸಭಾ ಸದ್ಯಸರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

**<><*<><>*><>**

ಅಧಿವೇಶನಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಸಂಸತ್ತಿನ ಚಳಿಗಾಲದ ಅಧಿವೇಶನವು ರಚನಾತ್ಮಕ ಮತ್ತು ಉತ್ಪಾದಕ ಚರ್ಚೆಗಳಿಂದ ತುಂಬಿರಲಿ ಎಂದು ಆಶಿಸಿದರು. ಸಂವಿಧಾನ ಅಂಗೀಕಾರದ ೭೫ನೇ ವರ್ಷಾಚರಣೆ ಸೇರಿದಂತೆ ಹಲವು ಕಾರಣಗಳಿಗೆ ಸಂಸತ್ತಿನ ಚಳಿಗಾಲದ ಅಧಿವೇಶನ ವಿಶೇಷವಾಗಿದೆ. ಇದು ಪ್ರಜಾಪ್ರಭುತ್ವದ ಅದ್ಭುತವಾದ ಮೈಲುಗಲ್ಲಾಗಿದೆ ಎಂದು ಹೇಳಿದರು. ಇದೇ ವೇಳೆ ಪ್ರತಿಪಕ್ಷಗಳನ್ನು ಟೀಕಿಸಿದ ಪ್ರಧಾನಿ ಮೋದಿ, ಸಾರ್ವಜನಿಕರಿಂದ ತಿರಸ್ಕರಿಸಲ್ಪಟ್ಟ ಬೆರಳೆಣಿಕೆಯಷ್ಟು ಜನರು ಅವ್ಯವಸ್ಥೆಯನ್ನು ಸೃಷ್ಟಿಸುವ ಮೂಲಕ ಸಂಸತ್ ಅನ್ನು ನಿಯಂತ್ರಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು. ಭಾರತದ ಜಾಗತಿಕ ಖ್ಯಾತಿ ಮತ್ತು ಪ್ರತಿಷ್ಠೆಯನ್ನು ಇನ್ನಷ್ಟು ಹೆಚ್ಚಿಸಲು ಸಂಸತ್ತಿನ ಸಮಯವನ್ನು ಬಳಸಿಕೊಳ್ಳಬೇಕು. ದೇಶಕ್ಕೆ ಇಂದು ಸಿಕ್ಕಿರುವ ಇಂತಹ ಅವಕಾಶಗಳು ವಿಶ್ವ ವೇದಿಕೆಯಲ್ಲಿ ಭಾರತಕ್ಕೆ ಅಪರೂಪವಾಗಿದ್ದು, ನಾವು ಇವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಪ್ರಜಾಪ್ರಭುತ್ವಕ್ಕೆ ದೇಶದ ಮತದಾರರ ಬದ್ಧತೆ, ಸಂವಿಧಾನಕ್ಕೆ ಅವರ ಸಮರ್ಪಣೆ ಮತ್ತು ಸಂಸದೀಯ ಕಾರ್ಯವಿಧಾನಗಳಲ್ಲಿ ಅವರ ನಂಬಿಕೆ ಅರ್ಥಪೂರ್ಣವಾಗಿದೆ. ಈ ಸಂದೇಶವು ಭಾರತದ ಸಂಸತ್ತಿನಿಂದ ಹೊರಹೊಮ್ಮಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><*<><>*><>

ವಕ್ಫ್ ತಿದ್ದುಪಡಿ ಕಾಯ್ದೆ ೨೦೨೪ರ ಸಂಸತ್ತಿನ ಜಂಟಿ ಸಮಿತಿಯ ಸದಸ್ಯರಾಗಿರುವ ವಿರೋಧಪಕ್ಷದ ಸಂಸದರು ಇಂದು ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರನ್ನು ಅವರ ಕಚೇರಿಯಲ್ಲಿ ಭೇಟಿಯಾದರು. ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಟಿಎಂಸಿ ಸಂಸದ ಕಲ್ಯಾಣ್ ಬ್ಯಾನರ್ಜಿ, ಸಂಸತ್ತಿನ ಜಂಟಿ ಸಮಿತಿಯ ಅಧ್ಯಕ್ಷರು, ವಿರೋಧಪಕ್ಷದ ಸದಸ್ಯರ ಮಾತನ್ನು ಪರಿಗಣಿಸುತ್ತಿಲ್ಲ ಮತ್ತು ತರಾತುರಿಯಲ್ಲಿ ವರದಿ ನೀಡಲು ಸಾಧ್ಯವಿಲ್ಲ ಎಂದು ಲೋಕಸಭೆ ಸ್ಪೀಕರ್ ಅವರಿಗೆ ಮನವರಿಕೆ ಮಾಡಿಕೊಡಲಾಗಿದೆ. ಸ್ಪೀಕರ್ ಅವರ ನಮ್ಮ ಭಾವನೆಗಳನ್ನು ಗೌರವಿಸಿದ್ದು, ವರದಿಯನ್ನು ಸಲ್ಲಿಸಲು ಸಮಯವನ್ನು ವಿಸ್ತರಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ಹೇಳಿದರು.

<><*<><>*><>

ನವದೆಹಲಿಯಲ್ಲಿ ಇಂದು ನಡೆದ ಹಮಾರ ಸಂವಿಧಾನ್ ಹಮಾರ ಸ್ವಾಭಿಮಾನ್ ಪಾದಯಾತ್ರೆಯಲ್ಲಿ ಕೇಂದ್ರ ಯುವ ವ್ಯವಹಾರಗಳ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್

ಮಾಂಡವೀಯ ಭಾಗವಹಿಸಿದ್ದರು. ಭಾರತೀಯ ಸಂವಿಧಾನ ಅಂಗೀಕಾರದ ದಿನದ ಆಚರಣೆಯ ಮುನ್ನಾ ದಿನವಾದ ಇಂದು, ಸಂವಿಧಾನ ಪಿತಾಮಹರು, ಭಾರತದ ಪ್ರಜಾಪ್ರಭುತ್ವದ ಮಹತ್ವದ ಹಾದಿಯನ್ನು ಸ್ಮರಿಸಿ ಗೌರವಿಸಲು ಪಾದಯಾತೆ ಹಮ್ಮಿಕೊಳ್ಳಲಾಗಿತ್ತು. ಪಾದಯಾತ್ರೆಯಲ್ಲಿ ಕೇಂದ್ರ ಸಚಿವರಾದ ಪಿಯುಷ್ ಗೋಯಲ್, ಅರ್ಜುನ ರಾಮ್ ಮೇಘ್ವಾಲ್, ಕಿರಣ್ ರಿಜಿಜು, ಗಜೇಂದ್ರ ಸಿಂಗ್ ಶೇಖಾವತ್, ರಕ್ಷಾ ಖಡ್ಸೆ ಸೇರಿದಂತೆ ಸಂಸದರು, ಒಲಿಂಪಿಕ್ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಕ್ರೀಡಾಪಟುಗಳು ಎನ್‌ಸಿಸಿ, ಎನ್‌ಎಸ್‌ಎಸ್, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳು ಸೇರಿದಂತೆ ಸ್ವಯಂ ಸೇವಕರು ಭಾಗವಹಿಸಿದ್ದರು.

<><*<><>*><>

ಭಾರತವು ಇಟಲಿಯನ್ನು ಪ್ರಮುಖ ಪಾಲುದಾರ, ಯುರೋಪ್‌ನಲ್ಲಿ ನಿರ್ಣಾಯಕ ಮಿತ್ರ ಮತ್ತು ಮೆಡಿಟರೇನಿಯನ್‌ನಲ್ಲಿ ಅತ್ಯಂತ ಪ್ರಭಾವಶಾಲಿ ದೇಶ ಎಂದು ಪರಿಗಣಿಸುತ್ತದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ಹೇಳಿದ್ದಾರೆ. ರೋಮ್‌ನಲ್ಲಿ ಭಾರತೀಯ ರಾಯಭಾರಿ ಕಚೇರಿಯ ಹೊಸ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರಸ್ತಾವಿತ ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್ ಕುರಿತು ಉಲ್ಲೇಖಿಸಿದ ಡಾ. ಎಸ್.ಜೈಶಂಕರ್, ಈ ಸಂಪರ್ಕ ಕಾರಿಡಾರ್ ಯುರೋಪ್ ಮತ್ತು ಏಷ್ಯಾದ ನಡುವೆ ದೊಡ್ಡ ಬದಲಾವಣೆ ತರಲಿದೆ ಎಂದು ಹೇಳಿದರು. ಇಟಲಿಯ ಭೇಟಿ ಸಮಯದಲ್ಲಿ ಡಾ. ಜೈಶಂಕರ್ ಅವರು ಫಿಯುಗಿಯಲ್ಲಿ ಜಿ೭ ವಿದೇಶಾಂಗ ಸಚಿವರ ಸಭೆಯ ಅಧಿವೇಶನದಲ್ಲಿ ಭಾಗವಹಿಸಲಿದ್ದಾರೆ. ಅಧಿವೇಶನದಲ್ಲಿ ಭಾರತವನ್ನು ಅತಿಥಿ ರಾಷ್ಟ್ರವಾಗಿ ಆಹ್ವಾನಿಸಲಾಗಿದೆ. ಬಳಿಕ ಅವರು ರೋಮ್‌ನಲ್ಲಿ ಎಂಇಡಿ ಮೆಡಿಟರೇನಿಯನ್ ಸಂವಾದದ ೧೦ ನೇ ಆವೃತ್ತಿಯಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಬುಧಾವಾರದಿಂದ ಮೂರು ದಿನಗಳ ಕಾಲ ತಮಿಳುನಾಡಿಗೆ ಭೇಟಿ ನೀಡಲಿದ್ದಾರೆ. ಗುರುವಾರ ಅವರು, ಊಟಿಯ ವೆಲ್ಲಿಂಗ್‌ಟನ್ ನಲ್ಲಿರುವ ರಕ್ಷಣಾ ಸೇವೆಗಳ ಸಿಬ್ಬಂದಿ ಕಾಲೇಜಿನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಶುಕ್ರವಾರ ಅವರು, ನೀಲಗಿರಿಯಲ್ಲಿ ಬುಡಕಟ್ಟು ಸಮುದಾಯದ ಜನರೊಂದಿಗೆ ಸಂವಾದ ನಡೆಸಲಿದ್ದಾರೆ. ಶನಿವಾರ

ಅವರು ತಿರುವಾರೂರ್‌ನ ತಮಿಳುನಾಡು ಕೇಂದ್ರೀಯ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ.

**<><*<><>*><>**

ಭಾರತದಲ್ಲಿ ಯುಪಿಐ ವೇಗವಾಗಿ ಮತ್ತು ವ್ಯಾಪಕವಾಗಿ ಬೆಳೆಯುತ್ತಿದೆ. ಡಿಜಿಟಲ್ ತಂತ್ರಜ್ಞಾನದಲ್ಲಿ ಭಾರತ ಡಿಜಿಟಲ್ ತಂತ್ರಜ್ಞಾನದಲ್ಲಿ ಭಾರತ ವಿಶ್ವನಾಯಕನಾಗಿ ಬೆಳೆಯುತ್ತಿದೆ. ಅಕ್ಟೋಬರ್ ತಿಂಗಳಲ್ಲಿ ಯುಪಿಐ ಮೂಲಕ ದಾಖಲೆಯ ೧೬.೬ ಬಿಲಿಯನ್ ವರ್ಗಾವಣೆಗಳು ಆಗಿವೆ ಎಂದು ಆರ್‌ಬಿಐ ತಿಳಿಸಿದೆ. ಭಾರತದ ಜನಸಂಖ್ಯೆಯಲ್ಲಿ ೨೦ ರಿಂದ ೩೦ ವರ್ಷದೊಳಗಿನ ಶೇಕಡ ೭೦ರಷ್ಟು ಜನರು ಹಾಗೂ ಗ್ರಾಮೀಣ ಭಾಗದ ಸುಮಾರು ಶೇಕಡ ೪೦ ರಷ್ಟು ಜನರು ಅಂತರ್ಜಾಲವನ್ನು ಬಳಸುತ್ತಿದ್ದಾರೆ. ಮೂರರಲ್ಲಿ ಒಂದು ಭಾಗದಷ್ಟು ನಿವಾಸಿಗಳು ಆನ್‌ಲೈನ್ ಖರೀದಿಯಲ್ಲಿ, ನಾಲ್ಕನೇ ಒಂದು ಭಾಗದಷ್ಟು ನಿವಾಸಿಗಳು ಗ್ರಾಹಕ ವಸ್ತುಗಳ ಖರೀದಿಯಲ್ಲಿ ಹಾಗೂ ೧೦ನೇ ಒಂದು ಭಾಗದಷ್ಟು ನಿವಾಸಿಗಳು ಆಹಾರ ಖರೀದಿಯಲ್ಲಿ ತೊಡಗಿದ್ದಾರೆ. ಭಾರತವು ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ವಿಸ್ತೃತ ಮಾಹಿತಿ ತಂತ್ರಜ್ಞಾನ ವಲಯ ಮತ್ತು ಡಿಜಿಟಲ್ ಬಳಕೆದಾರರ ಯುವ ಪೀಳಿಗೆಯನ್ನು ಹೊಂದಿದ್ದು, ಭವಿಷ್ಯದಲ್ಲಿ ಡಿಜಿಟಲ್ ತಂತ್ರಜ್ಞಾನದಲ್ಲಿ ಭಾರತವು ಮತ್ತಷ್ಟು ಮುನ್ನಡೆ ಸಾಧಿಸಲಿದೆ ಎಂದು ಆರ್‌ಬಿಐ ಡೆಪ್ಯೂಟಿ ಗರ್ವನರ್ ಮೈಕೆಲ್ ದೇಬಬ್ರತ ಪಾತ್ರ ಹೇಳಿದ್ದಾರೆ.

**<><*<><>*><>**

ಮಹಾರಾಷ್ಟ್ರದಲ್ಲಿ ನೂತನ ಸರ್ಕಾರ ರಚನೆಗೆ ಚಟುವಟಿಕೆಗಳು ಗರಿಗೆದರಿವೆ. ಬಿಜೆಪಿ, ಶಿವಸೇನೆ ಮತ್ತು ಎನ್‌ಸಿಪಿ ಒಳಗೊಂಡ ಮಹಾಯುತಿ ಮೈತ್ರಿಕೂಟವು ವಿಧಾನಸಭೆ ಚುನಾವಣೆಯಲ್ಲಿ ಭರ್ಜರಿ ಜಯ ಗಳಿಸಿದೆ. ಎನ್‌ಸಿಪಿ ಮುಖ್ಯಸ್ಥ ಅಜಿತ್ ಪವಾರ್ ಅವರ ನಿವಾಸದಲ್ಲಿ ನಿನ್ನೆ ಎನ್‌ಸಿಪಿ ಶಾಸಕರ ಸಭೆ ನಡೆಯಿತು. ಎನ್‌ಸಿಪಿ ರಾಜ್ಯಾಧ್ಯಕ್ಷ ಮತ್ತು ಲೋಕಸಭಾ ಸಂಸದ ಸುನೀತ್ ತಾಟ್ಕರೆ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಅಜಿತ್ ಪವಾರ್ ಅವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಮತ್ತು ಶಾಸಕ ಅನಿಲ್ ಪಾಟೀಲ್ ಅವರನ್ನು ಮುಖ್ಯ ಸಚೇತಕರಾಗಿ ಮರುನೇಮಕ ಮಾಡಲಾಯಿತು. ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ನೇತೃತ್ವದಲ್ಲಿ ಮುಂಬೈನಲ್ಲಿ ಶಿವಸೇನೆ ಶಾಸಕರ ಸಭೆ ಕೂಡ ನಡೆಯಿತು. ಏಕನಾಥ್ ಶಿಂಧೆ ಅವರು ಶಿವಸೇನೆ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆಯಾಗಿದ್ದಾರೆ. ಪಕ್ಷದ ಎಲ್ಲಾ ೫೭ ನೂತನ ಶಾಸಕರು, ಈ

ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಿದ್ದಾರೆ. ಇದೇ ವೇಳೆ, ಬಿಜೆಪಿ ಮಹಾರಾಷ್ಟ್ರ ಮುಖ್ಯಸ್ಥ ಚಂದ್ರಶೇಖರ್ ಭಾವನ್‌ಕುಲೆ ಅಧ್ಯಕ್ಷತೆಯಲ್ಲಿ ಮುಂಬೈನಲ್ಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಯಿತು. ನಾಳೆ ಹಾಲಿ ವಿಧಾನಸಭೆಯ ಅವಧಿ ಪೂರ್ಣಗೊಳ್ಳಲಿದ್ದು, ಬಳಿಕ ನೂತನ ಸರ್ಕಾರ ರಚನೆಯಾಗಲಿದೆ. ೨೮೮ ಸದಸ್ಯರ ಮಹಾರಾಷ್ಟ್ರ ವಿಧಾನಸಭೆಯಲ್ಲಿ ೧೩೨ ಸ್ಥಾನಗಳನ್ನು ಗೆಲ್ಲುವ ಮೂಲಕ  ಬಿಜೆಪಿ, ಏಕೈಕ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಇದೇ ವೇಳೆ ಏಕನಾಥ್ ಶಿಂಧೆ ನೇತೃತ್ವದ  ಶಿವಸೇನೆ ೫೭ ಸ್ಥಾನಗಳನ್ನು ಗೆದ್ದರೆ, ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ ೪೧ ಸ್ಥಾನಗಳಲ್ಲಿ ಜಯಭೇರಿ ಬಾರಿಸಿದೆ.

<><*<><>*><>

ನವದೆಹಲಿಯಲ್ಲಿ ಇಂದು 'ಅಬ್ ಕೋಯಿ ಬಹನಾ ನಹಿ' ಎಂಬ ರಾಷ್ಟ್ರೀಯ ಅಭಿಯಾನವನ್ನು ಕೇಂದ್ರ ಸರ್ಕಾರ ಪ್ರಾರಂಭಿಸಿದೆ. ಲಿಂಗ-ಆಧಾರಿತ ಹಿಂಸಾಚಾರವನ್ನು ತೊಡೆದುಹಾಕಲು, ಕ್ರಿಯಾಶೀಲ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಭಿಯಾನವು ಸಾರ್ವಜನಿಕರು, ಸರ್ಕಾರ ಮತ್ತು ಪ್ರಮುಖ ಮಧ್ಯಸ್ಥಗಾರರಿಗೆ ಕರೆ ನೀಡುತ್ತದೆ.  ಇದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವಾಲಯಗಳ ನಡುವಿನ ಸಹಯೋಗದ ಪ್ರಯತ್ನವಾಗಿದೆ. ಅಭಿಯಾನದಲ್ಲಿ, ಲಿಂಗ ಆಧಾರಿತ ಹಿಂಸಾಚಾರವನ್ನು ಕೊನೆಗೊಳಿಸುವುದರ ಪ್ರತಿಜ್ಞೆ ಮಾಡುವಂತೆ ಪ್ರತಿಯೊಬ್ಬ ನಾಗರಿಕರನ್ನು ಮನವಿ ಮಾಡಲಾಗುತ್ತದೆ. ಅಲ್ಲದೇ, ಹೊಣೆಗಾರಿಕೆಯ ಅಗತ್ಯವನ್ನು ಪ್ರದರ್ಶಿಸಲು 'ಅಬ್ ಕೋಯಿ ಬಹನಾ ನಹಿ' ಕುರಿತ ಚಲನಚಿತ್ರವನ್ನು ಬಿಡುಗಡೆ ಮಾಡಲಾಗುತ್ತದೆ.

<><*<><>*><>

ಪರ್ತ್‌ನಲ್ಲಿ ನಡೆಯುತ್ತಿರುವ ಬಾರ್ಡರ್-ಗವಾಸ್ಕರ್ ಟ್ರೋಫಿಯ ಭಾರತ-ಆಸ್ಟ್ರೇಲಿಯಾ ನಡುವಿನ ೫ ಪಂದ್ಯಗಳ ಸರಣಿಯ ಮೊದಲನೇ ಪಂದ್ಯದ ನಾಲ್ಕನೇ ದಿನವಾದ ಇಂದು ಇತ್ತೀಚಿನ ವರದಿಯಂತೆ ಆಸ್ಟ್ರೇಲಿಯಾ ೫೮.೩ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೨೩೮ ರನ್ ಮಾಡಿ ಆಡುತ್ತಿದೆ. ಇದಕ್ಕೂ ಮುನ್ನ ಭಾರತ ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ೬ ವಿಕೆಟ್ ನಷ್ಟಕ್ಕೆ ೪೮೭ ರನ್ ಗಳಿಸಿ ಡಿಕ್ಲೇರ್ ಘೋಷಿಸಿತು.

<><*<><>*><>

ಹೈದರಾಬಾದ್‌ನ ಜಿಎಂಸಿ ಬಾಲಯೋಗಿ ಅಥ್ಲೆಟಿಕ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಇಂಡಿಯನ್ ಸೂಪರ್ ಲೀಗ್ ಫುಟ್ಬಾಲ್ ಪಂದ್ಯಾವಳಿಯಲ್ಲಿ ಒಡಿಶಾ ಫುಟ್ಬಾಲ್ ಕ್ಲಬ್ ತಂಡವು

ಹೈದರಾಬಾದ್ ಫುಟ್ಬಾಲ್ ಕ್ಲಬ್ ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಕೇರಳದ ಕೊಚ್ಚಿಯ ಜವಹಾರ್‌ಲಾಲ್ ನೆಹರು ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಚೆನ್ನಾಯಿನ್ ಫುಟ್ಬಾಲ್ ಕ್ಲಬ್ ವಿರುದ್ಧ ೩-೦ ಗೋಲುಗಳ ಅಂತರದಿಂದ ಕೇರಳ ಬ್ಲಾಸ್ಟರ್ಸ್ ಫುಟ್ಬಾಲ್ ಕ್ಲಬ್ ಜಯ ಸಾಧಿಸಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ <>*><>**